

ಯರಗಟ್ಟಿ : ಸಮೀಪದ ಸತ್ತಿಗೇರಿ, ಇಟ್ನಾಳ, ಗುಡುಮಕೇರಿ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಮಂಗಳವಾರ ಹೋಳಿ ಹಬ್ಬವನ್ನು ಸಂಭ್ರಮದಿಂದ ಆಚರಿಸಲಾಯಿತು. ಸತ್ತಿಗೇರಿ ಗ್ರಾಮದಲ್ಲಿ ಕಾಮಣ್ಣನ ಮೇರವಣಿಗೆ ಮಾಡಲಾಯಿತು. ಭಕ್ತರಿಂದ ಕಟಗಿ, ಕುಳ್ಳು ಸೇರಿದಂತೆ ನೈವೇದ್ಯ ಸ್ವೀಕರಿಸಿ ಕಾಮದಹನ ಮಾಡಲಾಯಿತು. ಜನರು ತಮ್ಮ ಸ್ನೇಹಿತರಿಗೆ, ಬಂಧು ಗಳಿಗೆ ಹಾಗೂ ಆತ್ಮೀಯರಿಗೆ ಬಣ್ಣ ಎರಚಿ ದರು. ಬಣ್ಣದಾಟದಿಂದ ದೂರ ಉಳಿದವ ರನ್ನು ಹಬ್ಬಕ್ಕೆ ಎಳೆದು ತಂದು ಸಂಭ್ರಮಿಸಿದರು. ಕೆಲವೆಡೆ ಮಹಿಳೆಯರೂ ಬಣ್ಣದಾಟದಲ್ಲಿ ಭಾಗಿಯಾದರು.

# ಸಿದ್ದಾಪುರ ಗ್ರಾಮದ ನರೇಗಾ ಕೂಲಿಕಾರರಿಗೆ ಮತದಾನ ಜಾಗೃತಿ



ಕಾರಟಗಿ: ಮುಂಬರುವ ಸಾರ್ವತ್ರಿಕ ಲೋಕಸಭಾ ಚುನಾವಣೆಯಲ್ಲಿ ಪ್ರತಿಯೊಬ್ಬರೂ ಮತದಾನ ಮಾಡಬೇಕು ಎಂದು ತಾಲೂಕಾ ಪಂಚಾಯತ ಐಇಸಿ ಸಂಯೋಜಕ ಸೋಮನಾಥ ನಾಯಕ ಅವರು ಹೇಳಿದರು.

ತಾಲೂಕಿನ ಸಿದ್ದಾಪುರ ಗ್ರಾಮದ ನರೇಗಾ ಕೂಲಿಕಾರರಿಗೆ ಗ್ರಾಮದ ರೈತರ ಹೊಲದಲ್ಲಿ ನಾಲಾ ಹೂಳೆತ್ತುವ ಕೆಲಸ ನೀಡಲಾಗಿದ್ದು, ಕಾಮಗಾರಿ ಸ್ಥಳದಲ್ಲಿ ಆಯೋಜಿಸಲಾದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಭಾರತವು ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾಗಿದೆ. ಇಲ್ಲಿ ಎಲ್ಲರಿಗೂ ಮತದಾನದ ಹಕ್ಕಿದೆ. ದೇಶದ ಭವಿಷ್ಯಕ್ಕಾಗಿ ನಮ್ಮದೊಂದು ಮತ ಅತ್ಯಅಮೂಲ್ಯವಾದ್ದು, ದೇಶದ ಸುಭದ್ರ ಭವಿಷ್ಯಕ್ಕಾಗಿ ಪ್ರತಿಯೊಬ್ಬರು ತಪ್ಪದೇ ಮತದಾನ ಚಲಾಯಿಸಿ ಪ್ರಜಾಪ್ರಭುತ್ವ ಗೆಲ್ಲಿಸಿ. ಮತದಾರರು ಯಾವುದೇ ಆಸೆ, ಆಮೀಷಕ್ಕೆ ಒಳಗಾಗದೆ ನಮ್ಮ ಮತದಾನ ಹಕ್ಕು ಚಲಾಯಿಸಿ ಶೇ.100 ರಷ್ಟು ಮತದಾನದ ಪ್ರಗತಿ ಸಾಧಿಸಲು ಪ್ರತಿಯೊಬ್ಬರೂ ಸಹಕರಿಸಬೇಕು ಎಂದರು. ನಂತರ ಮತದಾನ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು. *ವಲಸೆ ಯಾಕ್ರಿ, ನಮ್ಮೂರಲ್ಲೇ ಉದ್ಯೋಗ ಖಾತ್ರಿ ಅಭಿಯಾನ:* ಏಪ್ರಿಲ್ 1 ರಿಂದ ಮೇ ಅಂತ್ಯದವರೆಗೆ ನರೇಗಾ ಯೋಜನೆಯಡಿ ಮಹಿಳೆಯರು, ವಿಶೇಷ ಚೇತನರು, ಲಿಂಗತ್ವ ಅಲ್ಪ ಸಂಖ್ಯಾತರು, ದುರ್ಬಲವರ್ಗದ ಕುಟುಂಬದವರು ಹಾಗೂ ಎಲ್ಲಾ ನೊಂದಾಯಿತ ಕೂಲಿಕಾರರಿಗೆ ನಿರಂತರವಾಗಿ ಕೆಲಸ ಒದಗಿಸಲಾಗುವುದು. ದಯವಿಟ್ಟು ಯಾರು ವಲಸೆ ಹೋಗಬಾರದು ನಮ್ಮೂರಲ್ಲೇ ಉದ್ಯೋಗ ಖಾತ್ರಿ ಕೆಲಸ ನೀಡಲಾಗುತ್ತಿದ್ದು, ಗ್ರಾ.ಪಂ ನಮೂನೆ- 6 ಸಲ್ಲಿಸಿ ಯೋಜನೆಯ ಸದುಪಯೋಗ ಪಡೆಯಿರಿ ಎಂದರು.ಈ ಸಂದರ್ಭಗಳಲ್ಲಿ ತಾಂತ್ರಿಕ ಸಹಾಯಕ ರಾಜೀವ್ ಭಾವಿ, ಬಿಎಫ್ಟಿಗಳಾದ ಬಸವರಾಜ್, ಅನಿಲ್ ಕುಮಾರ್, ಗ್ರಾಮ ಪಂಚಾಯತಿ ಸಿಬ್ಬಂದಿ ಯಶವಂತ್, ಮಂಜುನಾಥ ಇದ್ದರು.

## ಜಗದೀಶ್ ಶೆಟ್ಟರ್ ಅವರು ಕರ್ಮ ಭೂಮಿಯನ್ನು ಬದಲಾಯಿಸುವದು ಸರಿಯಲ್ಲ :ರಾಜಕುಮಾರ ಟೋಪಣ್ಣವರ

(1 ನೇ ಪುಟದಿಂದ)

ಇಲ್ಲ,ಅವರು ಅದನ್ನು ಅವಳಿ ನಗರದಲ್ಲೇ ಹುಡುಕಾಡುವದು ಸೂಕ್ತ ಎಂದು ರಾಜೀವ ಟೋಪಣ್ಣವರ ಶೆಟ್ಟರ್ ಅವರಿಗೆ ಸಲಹೆ ನೀಡಿದ್ದಾರೆ. ಜಗದೀಶ್ ಶೆಟ್ಟರ್ ಅವರು ಬೆಳಗಾವಿಯಲ್ಲಿ ಮನೆ ಮಾಡುವದಾಗಿ ಹೇಳಿದ್ದಾರೆ.

ಬೆಳಗಾವಿ ನನ್ನ ಕರ್ಮ ಭೂಮಿ ಎಂದು ಹೇಳುವ ಮೂಲಕ ಜನುಮ ಭೂಮಿ ಹುಬ್ಬಳ್ಳಿಯ ಜನರಿಗೆ ಅವಮಾನಿಸಿದ್ದಾರೆ.ಶೆಟ್ಟರ್ ಅವರ ಧೋರಣೆಗೆ ಬಿಜೆಪಿಯಲ್ಲೇ ಗೋ ಬ್ಯಾಕ್ ಶೆಟ್ಟರ್ ಶುರುವಾಗಿದೆ.ಶೆಟ್ಟರ್ ಪ್ರವೇಶದಿಂದ ಬೆಳಗಾವಿ ಬಿಜೆಪಿ ಹುಬ್ಬಳ್ಳಿಯ ವಶವಾಗಿದೆ. ಸ್ಥಳೀಯ ಬಿಜೆಪಿ ಕಾರ್ಯಕರ್ತರು ಅನಾಥ ಪ್ರಜ್ಞೆಯನ್ನು ಅನುಭವಿಸುತ್ತಿದ್ದಾರೆ ಎಂದು ಟೋಪಣ್ಣವರ ಪ್ರಕಟಣೆಯಲ್ಲಿ ಟೀಕೆ ಮಾಡಿದ್ದಾರೆ.

## ವಿಶ್ವ ಕ್ಷಯರೋಗ ದಿನಾಚರಣೆ ಕಾರ್ಯಕ್ರಮ
# 2025 ಕ್ಕೆ ಕ್ಷಯರೋಗ ಮುಕ್ತ ಜಿಲ್ಲೆಯನ್ನಾಗಿಸುವುದು ನಮ್ಮೆಲ್ಲರ ಗುರಿ: ನಲಿನ್ ಅತುಲ್

(1 ನೇ ಪುಟದಿಂದ)

ಜಿಲ್ಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಕ್ಷಯರೋಗ ಮಾದರಿ ಪರೀಕ್ಷೆಗಳನ್ನು ಹೆಚ್ಚಿಸಬೇಕು. ಕ್ಷಯರೋಗದ ಬಗ್ಗೆ ಹೆಚ್ಚಿನ ಪ್ರಚಾರ ಕಾರ್ಯವನ್ನು ಮಾಡಬೇಕು. ಕ್ಷಯರೋಗದ ನಿರ್ಮೂಲನೆಗಾಗಿ ಶ್ರಮಿಸಿದ ವೈದ್ಯಾಧಿಕಾರಿಗಳು, ಆರೋಗ್ಯ ಸಿಬ್ಬಂದಿ ಮತ್ತು ಆಶಾ ಕಾರ್ಯಕರ್ತೆಯರಿಗೆ ಸನ್ಮಾನಿಸಲಾಗುತ್ತಿದ್ದು, ಎಲ್ಲರಿಗೂ ಅಭಿನಂದಿಸುತ್ತೇನೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ ಟಿ.ಲಿಂಗರಾಜು ಅವರು ಮಾತನಾಡಿ, ಕ್ಷಯರೋಗವು ಅಪೌಷ್ಠಿಕತೆಯಿಂದ ಬಳಲುತ್ತಿರುವವರಲ್ಲಿ ಕಂಡುಬರುತ್ತೆ. ಅಂತಹ ಜನರನ್ನು ಗುರುತಿಸಿ ಕ್ಷಯ ಪತ್ತೆ ಮಾಡಿ, ಸೂಕ್ತ ಚಿಕಿತ್ಸೆ ನೀಡಲು ಕ್ರಮ ವಹಿಸಬೇಕು. ಚಿಕಿತ್ಸೆ ಪಡೆಯುವ ಕ್ಷಯ ರೋಗಿಗಳಿಗೆ ಚಿಕಿತ್ಸೆ ಮುಗಿಯುವವರೆಗೆ ಪೌಷ್ಠಿಕ ಆಹಾರಕ್ಕಾಗಿ ಪ್ರತಿ ತಿಂಗಳು ರೂ.500 ಗಳನ್ನು ನೀಡಲಾಗುತ್ತಿದೆ. ಆರೋಗ್ಯ ಇಲಾಖೆಯ ಈ ಯೋಜನೆಯ ಬಗ್ಗೆಯೂ ಸಾರ್ವಜನಿಕರಿಗೆ ಮಾಹಿತಿ ನೀಡಬೇಕು. ಕ್ಷಯರೋಗದ ನಿರ್ಮೂಲನೆಗಾಗಿ ಗ್ರಾಮ ಪಂಚಾಯತ್ ಮಟ್ಟದಿಂದ ಅರಿವು ಮತ್ತು ಜಾಗೃತಿಯನ್ನು ಮೂಡಿಸಲು ಶ್ರಮಿಸಬೇಕು. ಕ್ಷಯರೋಗದ ಬಗ್ಗೆ ಸಾರ್ವಜನಿಕರಲ್ಲಿರುವ ತಪ್ಪು ಕಲ್ಪನೆಗಳು ಹಾಗೂ ಮೂಢನಂಬಿಕೆಗಳನ್ನು ಹೋಗಲಾಡಿಸಬೇಕು. ಈ ನಿಟ್ಟಿನಲ್ಲಿ ಸಾರ್ವಜನಿಕರಿಗೆ ಸೂಕ್ತ ಅರಿವು ಮೂಡಿಸಬೇಕು ಎಂದರು.

ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿಗಳಾದ ಡಾ.ಶಶಿಧರ ಎ. ಅವರು ಮಾತನಾಡಿ, ಕ್ಷಯರೋಗವು ಮೈಕೋ ಬ್ಯಾಕ್ಟಿರಿಯಂ ಟ್ಯೂಬರ್‌ಕ್ಯೂಲೋಸಿಸ್ ಎಂಬ ಸೂಕ್ಷ್ಮಾಣುವಿನಿಂದ ರೋಗಿಯು ಕೆಮ್ಮುವುದರಿಂದ ಮತ್ತು ಸೀನುವುದರಿಂದ ಹೊರಬರುವ ಉಗುಳಿನಿಂದ ಹರಡುತ್ತದೆ. ಸಾಮಾನ್ಯವಾಗಿ ಶ್ವಾಸಕೋಶಗಳಿಗೆ ಹಬ್ಬುವ ಈ ರೋಗವು ದೇಹದ ಇತರ ಭಾಗಗಳಿಗೂ ಹರಡಬಹುದು. ಪ್ರಮುಖವಾಗಿ ಶ್ವಾಸಕೋಶದ ಮತ್ತು ಶ್ವಾಸಕೋಶೇತರ ಕ್ಷಯ ಎಂದು ವಿಂಗಡಿಸಲಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ 2023ನೇ ಸಾಲಿಗೆ ಜಿಲ್ಲೆಯಲ್ಲಿ ಸರಕಾರಿ ವಲಯ-3,090, ಖಾಸಗಿ ವಲಯ-506 ಸೇರಿ ಒಂದು ವರ್ಷಕ್ಕೆ 3,596 ಕ್ಷಯರೋಗಿಗಳ ಪತ್ತೆಯ ಗುರಿಯನ್ನು ಹೊಂದಲಾಗಿದ್ದು, ಸರಕಾರಿ ವಲಯದಲ್ಲಿ 2,748 ಮತ್ತು ಖಾಸಗಿ ವಲಯದಲ್ಲಿ 128 ಸೇರಿ ಒಟ್ಟು 2,876 ಕ್ಷಯರೋಗಿಗಳು ಪತ್ತೆಯಾಗಿರುತ್ತಾರೆ. ಇನ್ನೂ ಅನೇಕ ಪ್ರಕರಣಗಳನ್ನು ಪತ್ತೆ ಹಚ್ಚಬೇಕಾಗಿದ್ದು, 86 ಬಹು ಔಷಧ ನಿರೋಧಕ ಕ್ಷಯ ರೋಗಿಗಳು ಹಾಗೂ 164 ಹೆಚ್.ಐ.ವಿ ಸೋಂಕಿತ ಟಿಬಿ ರೋಗಿಗಳು ಪತ್ತೆಯಾಗಿರುತ್ತಾರೆ. 2022ನೇ ಸಾಲಿಗೆ ಹೋಲಿಸಿದಾಗ 2023ನೇ ಸಾಲಿನಲ್ಲಿ ಕ್ಷಯರೋಗ ಪತ್ತೆಯ ಪ್ರಮಾಣ ಕಡಿಮೆಯಾಗುತ್ತಿದ್ದು, ಇದಕ್ಕೆ ಮುಖ್ಯ ಕಾರಣ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕ್ಷಯರೋಗದ ಹರಡುವಿಕೆಯನ್ನು ತಡೆಗಟ್ಟಲು ಹಮ್ಮಿಕೊಂಡಿರುವ ಅನೇಕ ಯೋಜನೆಗಳಾಗಿವೆ ಎಂದರು.

ಕೊಪ್ಪಳ ಜಿಲ್ಲೆಯಲ್ಲಿ ಒಟ್ಟು 57 ಕಫ ಪರೀಕ್ಷಾ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಅವುಗಳಲ್ಲಿ 45,031 ಪರೀಕ್ಷೆಗಳಾಗಿದ್ದು, 437 ಕ್ಷಯರೋಗಿಗಳು ದೃಢಪಟ್ಟಿರುತ್ತವೆ. ಜಿಲ್ಲೆಯಲ್ಲಿ 4 ಸಿಬಿ ನಾಟ್ ಕೇಂದ್ರಗಳು ಕೊಪ್ಪಳ ಜಿಲ್ಲಾ ಆಸ್ಪತ್ರೆ, ಗಂಗಾವತಿ ಉಪ ವಿಭಾಗ ಆಸ್ಪತ್ರೆ, ಕನಕಗಿರಿಯ ಸಮುದಾಯ ಆರೋಗ್ಯ ಕೇಂದ್ರ ಮತ್ತು ಕುಷ್ಟಗಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುತ್ತಿವೆ. 2023ನೇ ಸಾಲಿನಲ್ಲಿ ಸಿಬಿ ನಾಟ್ ಕೇಂದ್ರಗಳಲ್ಲಿ 12,349 ಪರೀಕ್ಷೆಗಳು ಆಗಿದ್ದು, ಅದರಲ್ಲಿ 1,204 ಕ್ಷಯರೋಗಿಗಳು ದೃಢಪಟ್ಟು, ಇದರಲ್ಲಿ 27 ಬಹು ಔಷಧ ನಿರೋಧಕ ಕ್ಷಯರೋಗಿಗಳಾಗಿ ಪತ್ತೆ ಮಾಡಿ ಚಿಕಿತ್ಸೆಯನ್ನು ಪ್ರಾರಂಭಿಸಲಾಗಿದೆ. ಇದರೊಂದಿಗೆ 3 ಟ್ರೂನಾಟ್ ಕೇಂದ್ರಗಳು ಯಲಬುರ್ಗಾ ಸಾರ್ವಜನಿಕ ಆಸ್ಪತ್ರೆ, ಕುಕನೂರು ಸಮುದಾಯ ಆರೋಗ್ಯ ಕೇಂದ್ರ ಮತ್ತು ಗಂಗಾವತಿ ಉಪ ವಿಭಾಗ ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುವ ಮೂಲಕ ಹೆಚ್ಚು ಕ್ಷಯರೋಗಿಗಳನ್ನು ಪತ್ತೆ ಮಾಡಲಾಗುತ್ತಿದೆ. 2023ನೇ ಸಾಲಿನಲ್ಲಿ ಟ್ರೂನಾಟ್ ಕೇಂದ್ರಗಳಲ್ಲಿ 5,368 ಪರೀಕ್ಷೆಗಳು ಆಗಿದ್ದು, ಅದರಲ್ಲಿ 276 ಕ್ಷಯರೋಗಿಗಳು ದೃಢಪಟ್ಟು ಇದರಲ್ಲಿ 4 ಬಹುಔಷಧ ನಿರೋಧಕ ಕ್ಷಯರೋಗಿಗಳಾಗಿ ಪತ್ತೆ ಮಾಡಿ ಚಿಕಿತ್ಸೆಯನ್ನು ಪ್ರಾರಂಭಿಸಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳಾದ ಡಾ.ಪ್ರಕಾಶ ಕೆ., ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ ರವೀಂದ್ರನಾಥ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿಗಳಾದ ಡಾ.ಪ್ರಕಾಶ ಹೆಚ್., ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳಾದ ಡಾ.ವೆಂಕಟೇಶ, ತಾಲ್ಲೂಕು ಆರೋಗ್ಯಾಧಿಕಾರಿಗಳಾದ ಡಾ.ರಾಮಾಂಜಿನೇಯ, ಡಾ.ಗೌರಿಶಂಕರ, ಡಾ.ಆನಂದ ಗೋಟೂರು ಸೇರಿದಂತೆ ಜಿಲ್ಲೆಯ ಎಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳು, ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿ, ಆಶಾ ಕಾರ್ಯಕರ್ತೆಯರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಸಾಧಕರಿಗೆ ಸನ್ಮಾನ: ಕಾರ್ಯಕ್ರಮದ ಅಂಗವಾಗಿ ಕ್ಷಯರೋಗ ನಿರ್ಮೂಲನೆಗಾಗಿ ಜಿಲ್ಲೆಯ ಎಲ್ಲಾ ತಾಲ್ಲೂಕು ಮಟ್ಟದಲ್ಲಿ ಉತ್ತಮ ಸೇವೆ ಸಲ್ಲಿಸಿದ ವೈದ್ಯಾಧಿಕಾರಿಗಳಿಗೆ ಮತ್ತು ಇತರೆ ವಿವಿಧ ಕ್ಷೇತ್ರಗಳಲ್ಲಿ ಉತ್ತಮ ಕರ್ತವ್ಯ ನಿರ್ವಹಿಸಿದ ಆರೋಗ್ಯ ಇಲಾಖೆಯ ಸಿಬ್ಬಂದಿಗಳಿಗೆ ಸನ್ಮಾನಿಸಲಾಯಿತು.

# ಬೆಳಗಾವಿ ತಾಲೂಕಿನಲ್ಲಿ ಬೂತ ಮಟ್ಟದ ಕಾಂಗ್ರೆಸ್ ಕಾರ್ಯಕರ್ತರ ಸಭೆ

ಸಮಾಜ ಕಟ್ಟ ಕಡೆಯ ವ್ಯಕ್ತಿಯೂ ಸಮಾಜದಲ್ಲಿ ನೆಮ್ಮದಿಯಿಂದ ಬದುಕು ನಡೆಸಬೇಕಾಗಿದೆ, ಹೀಗಾಗಿ ಜನರ ಹಿತ ಕಾಯುವ ಕೈ ಗೆ ನೀವು ಶಕ್ತಿ ತುಂಬಬೇಕು ಎಂದು ಹೇಳಿದರು.

ಕಾಂಗ್ರೆಸ್ ಅಧಿಕಾರ ಉದ್ದಕ್ಕೂ ದೇಶದ ಜನರ ನೆಮ್ಮದಿ ಬಯಸಿದೆ. ಕಾಂಗ್ರೆಸ್ ಆಡಳಿತ ಅವಧಿಯಲ್ಲಿ ದೇಶದ ಅಭಿವೃದ್ಧಿಗೆ, ಕೃಷಿ ಕ್ಷೇತ್ರಕ್ಕೆ ಅಸಾಧಾರಣ ಕೊಡುಗೆ ನೀಡಿದೆ. ಮತ್ತೆ ದೇಶವನ್ನು ಕಟ್ಟಬೇಕಾಗಿದೆ ಹೀಗಾಗಿ ನವಯುವಕರು ರಾಜಕೀಯಕ್ಕೆ ಬರಬೇಕು. ದೇಶದ ಭವಿಷ್ಯ ಯುವಕರ ಕೈಯಲ್ಲಿ ಇದೆ, ಹೀಗಾಗಿ ಬಹುಮತ ಅಂತರದಿಂದ ಮತದಾರರು ಗೆಲ್ಲಿಸಬೇಕು ಎಂದು ಹೇಳಿದರು.

ಕಾಂಗ್ರೆಸ್ ಮುಖಂಡ ಅರವಿಂದ ಕುರ್ಚಿ ಮಾತನಾಡಿ, ದೇಶ ಮತ್ತು ರಾಜ್ಯದ ಅಭಿವೃದ್ಧಿಯನ್ನು ಜನತೆ ಬಯಸಿದ್ದಾರೆ. ಬಿಜೆಪಿಯಿಂದ "ನೈಯಾ ಪೈಸೆ" ಅಭಿವೃದ್ಧಿ ಕಾರ್ಯ ಅಸಾಧ್ಯ, ಬರೀ ಮೊದಿ ಅಲೆ ಇದೆ ಎಂದು ಹೇಳಿ ಚುನಾವಣೆ ಸ್ಪರ್ದಿಸುವವರಿಗೆ ಮತದಾರರು ಪಾಠ ಕಲಿಸಬೇಕು. ಕಾಂಗ್ರೆಸ್ ಗೆ ನಮ್ಮ ಅಮೂಲ್ಯವಾದ ಮತ ನೀಡಬೇಕು ಎಂದು ಹೇಳಿದರು. (1 ನೇ ಪುಟದಿಂದ)

ಕಾಂಗ್ರೆಸ್ 70 ವರ್ಷದ ಅಧಿಕಾರ ಅವಧಿಯಲ್ಲಿ ಕೇವಲ 50 % ಶೇಕಡಾ ಸಾಲ ಮಾಡಲಾಗಿತ್ತು, ಬಿಜೆಪಿ ಅಧಿಕಾರ ಅವಧಿ 10 ವರ್ಷದಲ್ಲಿ ಮೂರು ಪಟ್ಟು ಸಾಲ ದೇಶದ ಮೇಲೆ ಹೊರೆಸಿದೆ. ಎಲ್ಲವೂ ಸುಳ್ಳು, ಬಿಜೆಪಿಗರು ಜನತೆಯನ್ನು ಮರಳು ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ಈ ಭಾಗದ ಮನೆ-ಮಗಳಾಗಿರುವ ನಮ್ಮ ಪ್ರಿಯಂಕಾ ಜಾರಕಿಹೊಳಿ ಅವರನ್ನು ಚುನಾವಣೆಯಲ್ಲಿ ಬಹುಮತ ಅಂತರದಿಂದ ಗೆಲ್ಲಿಸಬೇಕಾಗಿದೆ. ಚಿಕ್ಕೋಡಿ ಬೆಳಗಾವಿಗೆ ಹತ್ತಿರವಾದರಿಂದ ಮಹಿಳೆಯರಿಗೆ ಅನುಕೂಲವಾಗಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಅರವಿಂದ್ ಕಾರ್ಚಿ, ಜಯಶ್ರೀ ಮಾಳಗಿ, ಮನೋಹರ ಹುಕ್ಕೇರಿಕರ್, ಶಿವಾಜಿ ಪಾಟೀಲ್, ಕಮಲಪ್ಪಾ ಅಷ್ಟಗಿ, ಬಸವಣ್ಣಿ ನಾಯ್ಕ, ಪಿಂಟು ನಾಯಕ, ಸಂತೋಷ ನಾಯಕ, ಮಂಜುನಾಥ ಕೋಲಕಾರ, ದುದಪ್ಪಾ ಅಸೋರೇಕರ್, ಯಲ್ಲಪ್ಪಾ ಮಾಸೇಕರ್ ಹಾಗೂ ಇತರರು ಇದ್ದರು.

# ನಾಟಕ ಅಕಾಡಮಿಗೆ ಹೆಸರು ತನ್ನಿ, ಈ ಭಾಗಕ್ಕೆ ಅವಕಾಶ ನೀಡಿ : ಜ್ಯೋತಿ ಮನವಿ



ಕೊಪ್ಪಳ : ಕಾಂಗ್ರೆಸ್ ಸರಕಾರದಲ್ಲಿ ಉತ್ತರ ಕರ್ನಾಟಕದ ಬಹುತೇಕ ಕವಿ, ಕಲಾವಿದ, ಸಾಹಿತಿ, ಚಿಂತಕರಿಗೆ ವಿವಿಧ ಅಕಾಡಮಿಗಳಲ್ಲಿ ಅವಕಾಶ ನೀಡುವ ಮೂಲಕ ಉತ್ತರ ಕರ್ನಾಟಕದ ಬಹುದಿನಗಳ ಆಸೆಗೆ ನೀರೆರೆದಿದ್ದಾರೆ ಎಂದು ಜಿಲ್ಲಾ ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ, ಗ್ಯಾರಂಟಿ ಪ್ರಾಧಿಕಾರ ಸದಸ್ಯೆ ಜ್ಯೋತಿ ಎಂ. ಗೊಂಡಬಾಳ ಸಂತಸ ವ್ಯಕ್ತಪಡಿಸಿದ್ದಾರೆ.

ಅವರು ನಗರದಲ್ಲಿ ನಾಟಕ ಅಕಾಡಮಿಗೆ ಸದಸ್ಯರಾಗಿ ನೇಮಕಗೊಂಡ ಸಮೀಪದ ಬಹೂದ್ದರಬಂಡಿ ಗ್ರಾಮದ ಹಿರಿಯ ರಂಗಕರ್ಮಿ, ಸಂಘಟಕ ಚಾಂದಪಾಶಾ ಕಿಲ್ಲೇದಾರ್ ಅವರನ್ನು ಸನ್ಮಾನಿಸಿ ಅಭಿನಂದಿಸಿ ಮಾತನಾಡಿದರು.

ಚಾಂದಪಾಶಾ ಕಿಲ್ಲೆದಾರ್ ಅವರು 18ನೇ ವರ್ಷದಲ್ಲಿಯೇ ಗುರಿ ಸಾಧಿಸಿದ ಗಂಡು ನಾಟಕದಲ್ಲಿ ಮೊದಲ ಬಾರಿಗೆ ರಂಗಪ್ರವೇಶ ಮಾಡಿದರು, ನಂತರ 1982 ರಲ್ಲಿ ಆಶಾ ಲತಾ ನಾಟಕದಲ್ಲಿ ಕಥಾ ನಾಯಾಕನ ಪಾತ್ರ ಮಾಡಿದ್ದು ಅದು ಸುಮಾರು 47 ಪ್ರಯೋಗಗಳನ್ನು ಕಂಡಿದೆ, ಕೆಟ್ಟ ಮೇಲೆ ಬುದ್ಧಿ ಬಂತು ನಾಟಕದಲ್ಲಿ ಅಮರೇಶನ ಪಾತ್ರ ಮಾಡಿದ್ದರು, ಬಾಳು ಬೆಳಗಿದ ಜ್ಯೋತಿ ಇನ್ನೂ ಅನೇಕ ನಾಟಕಗಳಲ್ಲಿ ಪಾತ್ರ ಮಾಡಿದ್ದರು. ಹುಚ್ಚ ಹಚ್ಚಿದ ಕಿಚ್ಚು, ಕುರುಬ ಹಚ್ಚಿದ ಕುಂಕುಮ ಸೇರಿ ಅನೇಕ ನಾಟಕಗಳಿಗೆ ನಿರ್ದೇಶನ ಮಾಡಿದ್ದು ಅಲ್ಲದೇ ಯಾರದೋ ತಪ್ಪು ಯಾರಿಗೋ ಶಿಕ್ಷೆ ನಾಟಕವನ್ನು ರಚಿಸಿ ನಿರ್ದೇಶನ ಮಾಡಿದ್ದು ಹೆಮ್ಮೆಯ ಸಂಗತಿ ಅವರು ಇಂದು ನಾಟಕ ಅಕಾಡಮಿಗೆ ಸದಸ್ಯರಾಗಿದ್ದಾರೆ.

ಚಾಂದಪಾಶಾ ಕಿಲ್ಲೆದಾರ್ ಅವರು ಸಂಘಟನೆಯಲ್ಲಿ ಇದ್ದು, ರಾಜಕೀಯದಲ್ಲೂ ಚಾಣಾಕ್ಷರಾಗಿದ್ದಾರೆ, ಉತ್ತಮ ಸ್ನೇಹ ಜೀವಿಯಾಗಿರುವ ಚಾಂದಪಾಶಾ ಅವರು ನಾಟಕ ಅಕಾಡಮಿಗೆ ಕೀರ್ತಿ ತರಲಿ ಈ ಭಾಗಕ್ಕೆ ಒತ್ತು ಕೊಟ್ಟು ನಿಜವಾದ ರಂಗಭೂಮಿಗೆ ಕೆಲಸ ಮಾಡುವವರನ್ನು ಗುರುತಿಸಿ ಎಂದು ಮನವಿ ಮಾಡಿದರು.

ಸನ್ಮಾನ ಸ್ವೀಕರಿಸಿದ ಚಾಂದಪಾಶಾ ಅವರು, ಕೈಲಾದ ಸೇವೆಯನ್ನು ಪ್ರಾಮಾಣಿಕವಾಗಿ ಮಾಡುವ ಮತ್ತು ಅವಕಾಶ ಕೊಟ್ಟ ಸರಕಾರಕ್ಕೆ ಗೌರವ ತರುವ ನಿಟ್ಟಿನಲ್ಲಿ ಕೆಲಸ ಮಾಡುವದಾಗಿ ಹೇಳಿದರು.

ಈ ಸಂದರ್ಭದಲ್ಲಿ ಸ್ವರಭಾರತಿ ಗ್ರಾಮೀಣಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಸ್ಥೆಯ ಅಧ್ಯಕ್ಷ ಮಂಜುನಾಥ ಜಿ. ಗೊಂಡಬಾಳ, ಶ್ರೀನಿವಾಸ ಪಂಡಿತ್, ಮಾನವಿ ಪಾಶಾ, ಸುಮಂಗಲಾ ಗಿಣಗೇರಿ ಇತರರು ಇದ್ದರು.

# ಅನ್ನಪೂರ್ಣ ಪದ್ಮಸಾಲಿಯವರ 'ಗುರುತಿನ ಕೊರತೆಗಳು' ಕೃತಿ ಬಿಡುಗಡೆ



ಕೊಪ್ಪಳ,ಮಾ-28;- ಲಿಖಿತ್-ರೀನಾ ಪ್ರಕಾಶನ, ಕೊಪ್ಪಳ ಹಾಗೂ ಕರ್ನಾಟಕ ಲೇಖಕಿಯರ ಸಂಘ ಕೊಪ್ಪಳ ಜಿಲ್ಲಾ ಶಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಸರಕಾರಿ ಬಾಲಕರ ಪ್ರೌಢ ಶಾಲೆಯಲ್ಲಿ ಶಿಕ್ಷಕಿಯಾಗಿ ಸೇವೆ ಸಲ್ಲಿಸುತ್ತಿರುವ ಶ್ರೀಮತಿ ಅನ್ನಪೂರ್ಣ ಪದ್ಮಸಾಲಿಯವರ 'ಗುರುತಿನ ಕೊರತೆಗಳು' ಎಂಬ ಚೊಚ್ಚಲ ಕವನ ಸಂಕಲನ ಮಾ,29ರಂದು ಬೆ.10ಕ್ಕೆ ನಗರದ ಕೃಷಿ ವಿಸ್ತರ್ಣಾ ಕೇಂದ್ರದಲ್ಲಿ ಬಿಡುಗಡೆಗೊಳ್ಳಲಿದೆ. ಈ ಕೃತಿಯನ್ನು ಪ್ರಾಧ್ಯಾಪಕರು ಹಾಗೂ ಲೇಖಕಿ ಡಾ.ಮುಮ್ತಾಜ್ ಬೇಗಂರವರು ಬಿಡುಗಡೆ ಮಾಡಲಿದ್ದಾರೆ. ಕೃತಿಯ ಕುರಿತು ಬೆಳಗಾವಿಯ ಕವಿಗಳು ಹಾಗೂ ವಿಮರ್ಶಕರಾದ ನಾಗೇಶ ಜೆ. ನಾಯಕ್‌ರವರು ಮಾತನಾಡಲಿದ್ದಾರೆ. ಈ ಕಾರ್ಯಕ್ರಮವನ್ನು ಹಿರಿಯ ಬರಹಗಾರರಾದ ಡಿ.ಎಂ.ಬಡಿಗೇರರವರು ಉದ್ಘಾಟಿಸಲಿದ್ದಾರೆ. ಬಂಡಾಯ ಸಾಹಿತಿಗಳಾದ ಪ್ರೊ.ಅಲ್ಲಮಪ್ರಭು ಬೆಟ್ಟದೂರುರವರು ಅಧ್ಯಕ್ಷತೆ ವಹಿಸಿಕೊಳ್ಳಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿಗಳಾದ ಎ.ಎಂ.ಮದರಿ, ಮಹಾಂತೇಶ ಮಲ್ಲನಗೌಡರ್, ಕೊಪ್ಪಳ ಜಿಲ್ಲಾ ಕಸಾಪದ ಅಧ್ಯಕ್ಷರಾದ ಶರಣೇಗೌಡ ಪೋಲಿಸ್ ಪಾಟೀಲ್, ಮಹಿಳಾ ಸಾಹಿತಿಗಳಾದ ಸಾವಿತ್ರಿ ಮುಜುಮದಾರ, ಅನಸೂಯ ಜಾಗೀರದಾರ್, ಅರುಣಾ ನರೇಂದ್ರರವರು ಉಪಸ್ಥಿತಿ ಇರಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಪ್ರಕಾಶನದ ವತಿಯಿಂದ ಡಾ.ಸಿದ್ಧಲಿಂಗಪ್ಪ ಕೊಟ್ನೆಕಲ್, ಅಶೋಕ ಓಜಿನಹಳ್ಳಿ, ಶಿಲ್ಪಾ ಕೃಷ್ಣ ಚಿತ್ರಗಾರ, ಭೀಮರಾಶಿ ಹೂಗಾರ ಮತ್ತು ಮಹೇಶ ಬಳ್ಳಾರಿಯವರಿಗೆ ವಿಶೇಷ ಸನ್ಮಾನ ಮಾಡಲಿದ್ದಾರೆ.

# ಸಾಧನೆಗೆ ಮಿತಿ ಇಲ್ಲ ಸಾಧಕರಿಗೆ ಕೊನೆ ಇಲ್ಲ: ತುಮಟಿ ಶ್ರೀನಿವಾಸಿ



ಸಂಡೂರು: ಮಾ: : ಸಾಧನೆಗೆ ಮಿತಿ ಇಲ್ಲ ಸಾಧಕರಿಗೆ ಕೊನೆ ಇಲ್ಲ ಈ ಸಂದೇಶದಂತೆ ಜೆ.ಸಿ.ಐ. ವ್ಯಕ್ತಿತ್ವ ವಿಕಸನ ಅಂತರಾಷ್ಟ್ರೀಯ ಸಂಸ್ಥೆಯಲ್ಲಿ ಸಾಧನೆ ಮಾಡುವ ಸಾಧಕರಿಗೆ ಗುರುತಿಸುವಂತಹ ಮಹತ್ತರ ಕಾರ್ಯವನ್ನು ಜೆ.ಸಿ.ಐ. ವ್ಯಾಲಿ ಸಂಸ್ಥೆ ಗೌರವಿಸುವಂತಹ ಮಹತ್ತರ ಕಾರ್ಯವನ್ನು ನೆರವೇರಿಸುತ್ತಿದೆ ಎಂದು ಯೋಗ ಗುರುವಾದ ತುಮಟಿ ಶ್ರೀನಿವಾಸ ತಿಳಿಸಿದರು.

ಅವರು ಇಂದು ಪಟ್ಟಣದ ಗುರುಭವನದಲ್ಲಿ ಜೆ.ಸಿ.ಐ. ವ್ಯಾಲಿ ಸಂಸ್ಥೆ ಹಮ್ಮಿಕೊಂಡಿದ್ದ ನೂತನ ಪದಾಧಿಕಾರಿಗಳ ಪದಗ್ರಹಣ ಮತ್ತು ಸನ್ಮಾನ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿ 2024ರ ಅಧ್ಯಕ್ಷನನ್ನಾಗಿ ಜೆ.ಸಿ.ಐ. ವ್ಯಾಲಿ ಸಂಸ್ಥೆಯ ಸದಸ್ಯರು ಅವಿರೋಧವಾಗಿ ಆಯ್ಕೆ ಮಾಡುವ ಮೂಲಕ ಸಾಧನೆ ಮಾಡುವ ಮತ್ತು ಸಾಧಕರನ್ನು ಗುರುತಿಸುವಂತಹ ಕಾರ್ಯದ ಜೊತೆಗೆ ಸಮಾಜದ ಸೇವೆಯನ್ನು ಮಾಡಲು ಹಿರಿಯರ ಮಾರ್ಗದರ್ಶನದಲ್ಲಿ ಸಾಗುತ್ತೇನೆ, ಈ ವರ್ಷದಲ್ಲಿ ನನ್ನ ಕನಸುಗಳಾದ ವ್ಯವಸ್ಥಾಪಕ ತರಬೇತಿ, ಗ್ರೋತ್ ಅಂಡ್ ಡೆವಲಪ್ ಮೆಂಟ್, ಕಮ್ಯೂನಿಟಿ ಡೆವಲಪ್ ಮೆಂಟ್ ಪ್ರೋಗ್ರಾಂ ಮತ್ತು ವ್ಯಾಪಾರ ತರಬೇತಿಗಳನ್ನು ನೀಡುವುದು ಜೊತೆಗೆ ಉಚಿತವಾಗಿ ನೇತ್ರ ತಪಾಸಣೆ ಶಿಬಿರ, ರಕ್ತದಾನ ಶಿಬಿರಗಳನ್ನು ಹಮ್ಮಿಕೊಳ್ಳುವುದು, ಶಾಲಾ ಮಕ್ಕಳಿಗೆ ಪರೀಕ್ಷೆಯ ಜಾಗೃತಿ ಮತ್ತು ಅದರ ಭಯವನ್ನು ಓಡಿಸಲು ತರಬೇತಿ, ಕಾಲೇಜು ಮತ್ತು ಸಾರ್ವಜನಿಕವಾಗಿ ಯುವಕರಿಗೆ ಭಾಷೆ, ಕಲೆಗಳನ್ನು ತಿಳಿಸುವಂತಹ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಉತ್ತಮ ಸೇವೆಯನ್ನು ಮಾಡಲಾಗುವುದು, ಅಲ್ಲದೆ ಮಹಿಳಾ ಮತ್ತು ಮಕ್ಕಳ ವಿಭಾಗದಲ್ಲಿ ಅನೇಕ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದುರ ಜೊತೆಗೆ ಘಟಕಗಳನ್ನು ಪ್ರಾರಂಭಿಸಿ ವಲಯ, ರಾಜ್ಯ ರಾಷ್ಟ್ರೀಯ ಮತ್ತು ಅಂತರ ರಾಷ್ಟ್ರೀಯ ಮಟ್ಟದಲ್ಲಿ ಬೆಳವಣಿಗೆಯನ್ನು ಸಾಧಿಸುವಂತಹ ಗುರಿಯನ್ನು ಹೊಂದಿದ್ದೇವೆ ಎಂದರು.

ಜೆ.ಸಿ.ಐ. ಪದಗ್ರಹಣ ಸಮಾರಂಭಕ್ಕೆ ವಿ.ವಿ. ಸಂಘದ ಸದಸ್ಯರಾದ ಜೆ.ಸಿ.ಕರಿಬಸವರಾಜ ಬಾದಾಮಿ, ರಾಷ್ಟ್ರೀಯ ತರಬೇತುದಾರರಾದ ಡಾ.ಕೇದರೇಶ್ವರ ದಂಡಿನ್, ನೂತನ ಅಧ್ಯಕ್ಷರಿಗೆ ಪ್ರಮಾಣವಚನ ಬೋಧಿಸಿದರು, ಹಾವಣಗಿಯ ಚನ್ನವೀರೇಶ್ ನೂತನ ಸದಸ್ಯರಿಗೆ ಪದಗ್ರಹಣ ಬೋಧಿಸಿದರು, ಕೊಟ್ರಪ್ಪ ಸೋಗಿ, ಸಂತೋಷ್, ಇತರರು ಉಪಸ್ಥಿತರಿದ್ದರು, ಅಧ್ಯಕ್ಷತೆಯನ್ನು ಜೆ.ಸಿ. ಫಿರೋಜ್ ವಹಿಸಿದ್ದರು, ಕಾರ್ಯಕ್ರಮದಲ್ಲಿ ಪ್ರಾರ್ಥನೆಯನ್ನು ಮಂಗಳಗೌರಿ ನೆರವೇರಿಸಿದರು, ಹೇಮಂತ ಬಿ.ಎಂ., ಬಿ.ಎಂ.ಶಿವಕುಮಾರ್ ವಂದಿಸಿದರು.

# ಕೆಇಎಲ್‌ಯಲ್ಲಿ ವಿಶ್ವಟಿಬಿ ದಿನಾಚರಣೆ



ಬೆಳಗಾಬಿ: ಕ್ಷಯರೋಗವು ನೇರವಾಗಿ ಶ್ವಾಸಕೋಶಕ್ಕೆ ತೊಂದರೆ ಉಂಟುಮಾಡುವದರಿಂದ ಆರೋಗ್ಯದ ಮೇಲೆ ತೀವ್ರತರವಾದ ಪರಿಣಾಮ ಬೀರುತ್ತದೆ. ಭಾರತ ಸೇರಿದಂತೆ ವಿಶ್ವದಲ್ಲಿ ಟಿಬಿ ಅನ್ನು ನಿರ್ಮೂಲನೆ ಮಾಡಲು ಪಣ ತೊಡಲಾಗಿದೆ. ಆದರೂ ಕೂಡ ಅದನ್ನು ಸಂಪೂರ್ಣವಾಗಿ ತಡೆಗಟ್ಟಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ರೋಗಿಗಳು ಚಿಕಿತ್ಸೆಯನ್ನು ಅರ್ಧಕ್ಕೆ ನಿಲ್ಲಿಸದೇ ನಿರಂತರವಾಗಿ ಪಡೆದರೆ ಸಂಪೂರ್ಣ ಗುಣಮುಖ ಸಾಧ್ಯ ಎಂದು ಕೆಎಲ್‌ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕರಾದ ಡಾ. (ಕರ್ನಲ್) ಎಂ ದಯಾನಂದ ಅವರಿಂದಿಲ್ಲಿ ಹೇಳಿದರು.

ಕೆಎಲ್‌ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆ ಹಾಗೂ ವೈದ್ಯಕೀಯ ಸಂಶೋಧನಾ ಕೇಂದ್ರದಲ್ಲಿಂದು ವಿಶ್ವಟಿಬಿ ದಿನಾಚರಣೆ ಅಂಗವಾಗಿ ಏರ್ಪಡಿಸಿದ್ದ ಸಮಾರಂಭ ಹಾಗೂ ಕಿರು ನಾಟಕವನ್ನು ಉದ್ಘಾಟಿಸಿ ಮಾತನಾಡಿದ ಅವರು, ಚಿಕಿತ್ಸೆ ಕಷ್ಟವೇನಲ್ಲ. ಕೇವಲ 6 ತಿಂಗಳು ಕಾಲ ನಿರಂತರವಾಗಿ ಚಿಕಿತ್ಸೆ ಪಡೆದರೆ ಗುಣಮುಖರಾಗುತ್ತಾರೆ. ಆದರೆ ಕೆಲವರು ಅರ್ಧಕ್ಕೆ ನಿಲ್ಲಿಸುತ್ತಾರೆ ಇರರಿಂದ ಗಂಭೀರ ಸ್ಥಿತಿಗೆ ತಲುಪಬಹುದು. ಆದ್ದರಿಂದ ಯಾವುದೇ ಕಾರಣಕ್ಕೂ ಚಿಕಿತ್ಸೆ ನಿಲ್ಲಿಸಬೇಡಿ. ಚಿಕಿತ್ಸೆಗೆ ಸಹಕರಿಸಿ. ರೋಗ ಉಲ್ಬಣಗೊಂಡಾಗ ಆಸ್ಪತ್ರೆಗೆ ಅಲೆದಾಡುವದರಿಂದ ತೊಂದರೆ ಹೆಚ್ಚು ಎಂದು ಅವರು, ರೋಗಿಗಳಿಗೆ ತಾತ್ಸಾರ ಮನೋಭಾವನೆ ಮಾಡದೇ ಅವರೊಂದಿಗೆ ಬೆರೆತು ನಡೆಯಿರಿ ಎಂದು ಸಲಹೆ ನೀಡಿದರು. ಶ್ವಾಸಕೋಶ ತಜ್ಞವೈದ್ಯರಾದ ಡಾ. ಗೌತಮ ಅವರು ಮಾತನಾಡಿ, ಕಳೆದ ಒಂದು ವರ್ಷದಲ್ಲಿ ಸುಮಾರು 3 ಸಾವಿರಕ್ಕೂ ಅಧಿಕ ರೋಗಿಗಳು ಕೆಎಲ್‌ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆ ಕಂಡು ಬಂದಿದ್ದಾರೆ. ಅದರಂತೆ ಆರೋಗ್ಯ ಸಚಿವಾಲಯದ ಮಾಹಿತಿಯ ಪ್ರಕಾರ, ದೇಶದಲ್ಲಿ 2022 ರಲ್ಲಿ 2.42 ಮಿಲಿಯನ್ ಟಿಬಿ ರೋಗಿಗಳಾಗಿದ್ದರೆ, 2023ರಲ್ಲಿ 2.23 ಮಿಲಿಯನ್ ಇದ್ದಾರೆ ಎಂದು ವಿವರಿಸಿದರು.

ಶ್ವಾಸಕೋಶ ವಿಭಾಗದ ಮುಖ್ಯಸ್ಥರಾದ ಡಾ. ಭಾಗ್ಯಶ್ರೀ ಪಾಟೀಲ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ವಿಶ್ವದಾದ್ಯಂತ ಸಾವಿಗೆ ಕಾರಣವಾಗುವ 10 ಸೋಂಕುಗಳಲ್ಲಿ ಕ್ಷಯರೋಗವು ಮೇಲ್ಪಂಕ್ತಿಯಲ್ಲಿದೆ. ಸುಮಾರು 1 ಮಿಲಿಯನಗೂ ಅಧಿಕ ಜನರು ಕ್ಷಯರೋದಿಂದ ಸಾವನ್ನಪ್ಪಿದರೆ, ಭಾರತದಲ್ಲಿ ಪ್ರತಿನಿಮಿಷಕ್ಕೆ ಇಬ್ಬರು ಮೃತಪಡುತ್ತಿದ್ದಾರೆ.

ಆದ್ದರಿಂದ ರೋಗಪತ್ತೆಯಾದ ತಕ್ಷಣ ವಿಳಂಬ ಮಾಡದೇ ಸೂಕ್ತ ಚಿಕಿತ್ಸೆಯನ್ನು ಪಡೆಯಬೇಕು ಎಂದರು. ಈ ಸಂದರ್ಭದಲ್ಲಿ ಜೆಎನ್ ವೈದ್ಯಕೀಯ ಮಹಾವಿದ್ಯಾಲಯದ ಪ್ರಭಾರ ಪ್ರಾಚಾರ್ಯರಾದ ಡಾ. ರಾಜೇಶ ಪವಾರ, ಡಾ. ಜಿ ಎಸ್ ಗಾವಡೆ, ಡಾ. ಆರಿಫ್ ಮಾಲ್ದಾರ, ಡಾ. ಕಿರಣಕುಮಾರ ಪೂಜಾರ, ಡಾ.ಜ್ಯೋತಿ ಹಟ್ಟಿಹೊಳಿ, ಡಾ. ನಂಗಪ್ಪಾ ಕೆ., ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ವೈದ್ಯವಿದ್ಯಾರ್ಥಿಗಳು ಅರಿವು ಎಂಬ ಕಿರುನಾಟಕ ಪ್ರದರ್ಶಿಸಿದರು.